ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

**ಸಂಖ್ಯೆ : ವಾಇ : ಉ ನಿ : ಸುಮಪ : 2018–19** **ದಿನಾಂಕ: 3–7–2018**

ಸಂಖ್ಯೆ 591/691

# ಪತ್ರಿಕಾ ಪ್ರಕಟಣೆ

ವಿಧಾನ ಪರಿಷತ್ತಿನಲ್ಲಿ ಇಂದು:

## ಕೆರೆಗಳ ಒತ್ತುವರಿ – ತೆರವುಗೊಳಿಸಲು ಸೂಕ್ತ ಕ್ರಮ

ಬೆಂಗಳೂರು, ಜುಲೈ 3 (ಕರ್ನಾಟಕ ವಾರ್ತೆ)

ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆ ಕಾರ್ಯವ್ಯಾಪ್ತಿಯಲ್ಲಿ ಒಟ್ಟು 3695 ಕೆರೆಗಳಿದ್ದು, ಅವುಗಳಲ್ಲಿ 2501 ಕೆರೆಗಳ ಸರ್ವೇ ಕಾರ್ಯ ಕೈಗೊಂಡಿದ್ದು ಇವುಗಳಲ್ಲಿ 1150 ಕೆರೆಗಳ ಒತ್ತುವರಿಯನ್ನು ಗುರುತಿಸಲಾಗಿದೆ. ಒಟ್ಟು 5,791.06 ಹೆಕ್ಟೇರ್ ಪ್ರದೇಶವು ಒತ್ತುವರಿಯಾಗಿರುತ್ತದೆ. ಅವುಗಳಲ್ಲಿ 1058 ಕೆರೆಗಳ ಒತ್ತುವರಿಯನ್ನು ತೆರವುಗೊಳಿಸಲಾಗಿದೆ ಎಂದು ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಸಚಿವ ಸಿ.ಎಸ್. ಪುಟ್ಟರಾಜು ಅವರು ತಿಳಿಸಿದರು.

ವಿಧಾನ ಪರಿಷತ್ತಿನಲ್ಲಿ ಇಂದು ಸದಸ್ಯರಾದ ಶ್ರೀಕಂಠೇಗೌಡ ಅವರ ಗಮನ ಸೆಳೆಯುವ ಸೂಚನೆಗೆ ಉತ್ತರಿಸಿ ಮಾತನಾಡಿದ ಸಚಿವರು 393.42 ಹೆಕ್ಟೇರ್ ಪ್ರದೇಶವನ್ನು ತೆರವುಗೊಳಿಸಬೇಕಾಗಿದೆ.

ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯಡಿ ಪ್ರಥಮ ದರ್ಜೆ ಭೂಮಾಪಕರ ಹುದ್ದೆಗಳು, ಒಂದು ದ್ವಿತೀಯ ದರ್ಜೆ ಭೂಮಾಪಕರ ಹುದ್ದೆ ಮಂಜೂರಾಗಿದ್ದು, ಇವುಗಳಲ್ಲಿ 2 ಹುದ್ದೆಗಳು ಮಾತ್ರ ಭರ್ತಿಯಾಗಿದೆ. ಕಂದಾಯ ಇಲಾಖೆಯ ಭೂಮಾಪಕರು ಹಾಗೂ ಪರವಾನಗಿ ಪಡೆದ ಖಾಸಗಿ ಭೂಮಾಪಕರಿಂದ ಭೂಮಾಪನ ನಡೆಸಿ ಒತ್ತುವರಿಯನ್ನು ಗುರುತಿಸಿ ತೆರವುಗೊಳಿಸುವ ಕ್ರಮ ಕೈಗೊಳ್ಳಲಾಗಿದೆ ಎಂದರು.

ಡಿಪಿಎಂ:ಜೆಡಿ:ಜಿಪಿಆರ್.

ಸಂಖ್ಯೆ 592/692

## ಶೀಘ್ರದಲ್ಲಿ ಕನ್ನಡ ಚಲನಚಿತ್ರೋದ್ಯಮ ಸಮಗ್ರ ನೀತಿ

ಬೆಂಗಳೂರು, ಜುಲೈ 3 (ಕರ್ನಾಟಕ ವಾರ್ತೆ)

"ಕನ್ನಡ ಚಲನಚಿತ್ರ ನೀತಿ-2011" ರಲ್ಲಿ ಚಲನಚಿತ್ರ ರಂಗದ ಅಭಿವೃದ್ಧಿಗೆ ಸಂಬಂಧಿಸಿದಂತೆ ಎಲ್ಲಾ ವಿಚಾರಗಳು ಸೇರ್ಪಡೆಯಾಗಿದ್ದು, ಶೀಘ್ರದಲ್ಲಿ ಕನ್ನಡ ಚಲನಚಿತ್ರ ಸಮಗ್ರ ನೀತಿ ಜಾರಿಗೆ ಬರಲಿದೆ ಎಂದು ಮಹಿಳಾ ಮತ್ತು ಮಕ್ಕಳ ಕಲ್ಯಾಣ ಹಾಗೂ ಕನ್ನಡ ಮತ್ತು ಸಂಸ್ಕೃತಿ ಸಚಿವೆ ಡಾ. ಜಯಮಾಲ ಅವರು ತಿಳಿಸಿದರು.

ಪರಿಷತ್ತಿನ ಸದಸ್ಯರಾದ ಶ್ರೀಮತಿ ತಾರಾ ಅನುರಾಧ ಅವರ ಗಮನ ಸೆಳೆಯುವ ಪ್ರಶ್ನೆಗೆ ಮುಖ್ಯಮಂತ್ರಿಗಳ ಪರವಾಗಿ ಉತ್ತರಿಸಿದ ಸಚಿವರು ಕನ್ನಡ ಚಲನಚಿತ್ರರಂಗವು ಕರ್ನಾಟಕದಲ್ಲಿ ಸದೃಢವಾಗಿ ನೆಲೆಯೂರಬೇಕೆನ್ನುವ ಸದಾಶಯದಿಂದ ಕನ್ನಡ ಮತ್ತು ಕರ್ನಾಟಕದ ಪ್ರಾದೇಶಿಕ ಭಾಷ ಚಿತ್ರಗಳಿಗೆ ಸಹಾಯಧನ, ಪ್ರಶಸ್ತಿ ಪುರಸ್ಕಾರ ಮುಂತಾದ ಮುಖ್ಯ ಯೋಜನಾಕ್ರಮಗಳನ್ನು ಪರಿಷ್ಕರಿಸಿ, ಸಮಕಾಲೀನಗೊಳಿಸಿ, ನಮ್ಮ ಚಿತ್ರರಂಗದ ಉನ್ನತಿಗೆ ಬೇಕಾದ ಹೊಸ ವಿಷಯಗಳನ್ನು ಸೇರಿಸಿ ಸಮಗ್ರ ಕನ್ನಡ ಚಲನಚಿತ್ರ ನೀತಿ ಜಾರಿಗೆ ತರಲಾಗುವುದು ಎಂದರು.

ಬೆಂಗಳೂರು ಅಂತರಾಷ್ಟ್ರೀಯ ಚಲನಚಿತ್ರೋತ್ಸವದ ಕಾರಣ ಇಡೀ ಜಗತ್ತೇ ಬೆಂಗಳೂರಿನ ಕಡೆ ನೋಡುವ ಅವಕಾಶ ಒದಗಿದೆ ಎಂದರು. ಜಿಲ್ಲಾ ಕೇಂದ್ರಗಳಲ್ಲು ಚಿತ್ರೋತ್ಸವವನ್ನು ಆಚರಿಸುವ ಉದ್ದೇಶ ಹೊಂದಲಾಗಿದೆ.

ಜಿಲ್ಲೆ ಹಾಗೂ ತಾಲ್ಲೂಕು ಮಟ್ಟದಲ್ಲಿ ಜನತಾ ಚಿತ್ರ ಮಂದಿರ ನಿರ್ಮಿಸಲು ಮುಂದೆ ಬರುವ ಉದ್ಯಮಿಗಳಿಗೆ ಪ್ರತಿ ಚಿತ್ರಮಂದಿರಕ್ಕೆ ತಲಾ 50.00 ಲಕ್ಷ ರೂ. ಹಾಗೂ ಚಿತ್ರಮಂದಿರ ನವೀಕರಣಕ್ಕೆ ಪ್ರತಿ ಚಿತ್ರಮಂದಿರಕ್ಕೆ 25.00 ಲಕ್ಷ ರೂ. ಉತ್ತೇಜನ ಹಾಗೂ ಪ್ರೋತ್ಸಾಹಧನ ನೀಡಲಾಗುವುದು ಎಂದರು.

ಚಲನಚಿತ್ರ ಚಿತ್ರೀಕರಣಕ್ಕೆ ಸಂಬಂದಿಸಿದ ಹಲವಾರು ಸಮಸ್ಯೆಗಳಿಗೆ ಪರಿಹಾರವಾಗಿ ಏಕ ಗವಾಕ್ಷಿ ಪದ್ಧತಿಯನ್ನು ಜಾರಿಗೆ ತರುವ ನಿಟ್ಟಿನಲ್ಲಿ ಈಗಾಗಲೇ ಕ್ರಮ ಕೈಗೊಳ್ಳುತ್ತಿದೆ ಎಂದರು.

ಮಲ್ಟಿಪ್ಲೆಕ್ಸ್ ಚಿತ್ರಮಂದಿರಗಳಲ್ಲಿನ ಅಧಿಕ ಟಿಕೆಟ್ ದರ ಹಾಗೂ ಇತರ ಎಲ್ಲಾ ಸಮಸ್ಯೆಗಳಿಗೆ ಸರ್ಕಾರ ಸೂಕ್ತ ರೀತಿಯಲ್ಲಿ ಸ್ಪಂದಿಸಿ ಸಮಗ್ರ ಚಿತ್ರ ನೀತಿ ಮೂಲಕ ಪರಿಹಾರ ದೊರಕಿಸಿಕೊಡಲಿದೆ ಎಂದರು.

ಡಿಪಿಎಂ:ಜೆಡಿ:ಜಿಪಿಆರ್.

ಸಂಖ್ಯೆ 593/693

# ರಸಗೊಬ್ಬರ ಖರೀದಿಸುವಾಗ ರೈತರು ಗಮನಿಸಬೇಕಾದ ಅಂಶಗಳು

ಬೆಂಗಳೂರು, ಜುಲೈ 3 (ಕರ್ನಾಟಕ ವಾರ್ತೆ)

ರೈತರು ರಸಗೊಬ್ಬರ ಖರೀದಿಸುವಾಗ ಕಡ್ಡಾಯವಾಗಿ ಆಧಾರ್ ಪ್ರತಿಯನ್ನು ಹೊಂದಿರುವ ಬಗ್ಗೆ ಹಾಗೂ ರಸಗೊಬ್ಬರ ಮಾರಾಟಗಾರರು ಕಡ್ಡಾಯವಾಗಿ ಪಾಸ್ ಉಪಕರಣದ ಮುಖಾಂತರವೇ ಮಾರಾಟ ಮಾಡುವಂತೆ ಜಂಟಿ ಕೃಷಿ ನಿರ್ದೇಶಕರ ಕಚೇರಿ ಸೂಚನೆಗಳನ್ನು ನೀಡಿದೆ.

ರಸಗೊಬ್ಬರ ಖರೀದಿಸುವ ರೈತರು ಕಡ್ಡಾಯವಾಗಿ ಆಧಾರ್ ಪ್ರತಿಯನ್ನು ಹೊಂದಿರಬೇಕು. ಸ್ವಂತ ಜಮೀನನ್ನು ಹೊಂದಿರುವ ರೈತರ ಪರವಾಗಿ ಖರೀದಿಸುವವರು ಜಮೀನು ಹೊಂದಿದ ರೈತರ ಹಾಗೂ ತಮ್ಮ ಆಧಾರ್ ಪ್ರತಿಯನ್ನು ಕಡ್ಡಾಯವಾಗಿ ಹೊಂದಿರಬೇಕು. ಕೇಂದ್ರ ಸರ್ಕಾರದಿಂದ ನಿಗದಿಯಾದ 45 ಕೆ.ಜಿ. ತೂಕದ ಯೂರಿಯಾ ರಸಗೊಬ್ಬರ ಚೀಲಗಳನ್ನು ಪೂರೈಸಲಾಗುವುದು.

ಚಿಲ್ಲರೆ ರಸಗೊಬ್ಬರ ಮಾರಾಟಗಾರರಿಗೆ ವಿಶೇಷ ಸೂಚನೆ:

ನೇರ ನೆರವು ವರ್ಗಾವಣೆ (DBT ) ಯೋಜನೆಯಡಿ ಚಿಲ್ಲರೆ ರಸಗೊಬ್ಬರ ಮಾರಾಟಗಾರರು ಪಾಸ್ ಉಪಕರಣದ ಮುಖಾಂತರವೇ ರಸಗೊಬ್ಬರವನ್ನು ಮಾರಾಟ ಮಡಬೇಕು, ಇಲ್ಲವಾದಲ್ಲಿ ಅಂತಹ ಮಾರಾಟಗಾರರ ಪರವಾನಗಿಯನ್ನು ರದ್ದುಪಡಿಸಲಾಗುವುದು ಎಂದು ಜಂಟಿ ಕೃಷಿ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಡಿಪಿಎಂ:ಜೆಡಿ:ಜೆಪಿಆರ್.

ಸಂಖ್ಯೆ 594/694

# 2018 ನೇ ಸಾಲಿನ ಪುಸ್ತಕ ಬಹುಮಾನಕ್ಕಾಗಿ ಅರ್ಜಿ ಆಹ್ವಾನ

ಬೆಂಗಳೂರು, ಜುಲೈ 3 (ಕರ್ನಾಟಕ ವಾರ್ತೆ)

ಕರ್ನಾಟಕ ಲಲಿತಕಲಾ ಅಕಾಡೆಮಿಯು ಪ್ರತಿವರ್ಷದಂತೆ 2018ನೇ ಸಾಲಿನ ಪುಸ್ತಕ ಬಹುಮಾನ ಯೋಜನೆಗಾಗಿ ಹಲವು ಪ್ರಕಾರಗಳ ಚಿತ್ರಕಲೆಗೆ ಸಂಬಂಧಿಸಿದ ಕನ್ನಡ ಪುಸ್ತಕಗಳನ್ನು ಆಹ್ವಾನಿಸಿದೆ.

ಪ್ರತಿ ಪ್ರಕಾರದಲ್ಲಿ ವಿಮರ್ಶಕರು ಆಯ್ಕೆ ಮಾಡುವ ಒಂದು ಪುಸ್ತಕಕ್ಕೆ ಬಹುಮಾನ ನೀಡಲಾಗುವುದು. ಬಹುಮಾನಕ್ಕೆ ಸಲ್ಲಿಸುವ ಪುಸ್ತಕಗಳು 2017 ಜನವರಿ 1 ರಿಂದ 2017 ರ ಡಿಸೆಂಬರ್

31 ರೊಳಗೆ ಪ್ರಥಮ ಆವೃತ್ತಿಯಾಗಿ ಪ್ರಕಟವಾಗಿರುವ ಪುಸ್ತಕಗಳಾಗಿರಬೇಕು. ಪುಸ್ತಕದ ತಾಂತ್ರಿಕ ಪುಟದಲ್ಲಿ ಪ್ರಥಮ ಮುದ್ರಣ 2017 ಎಂದು ಮುದ್ರಿತವಾಗಿರಬೇಕು.

**2018ನೇ ಸಾಲಿನ ಅತ್ಯುತ್ತಮ ಪುಸ್ತಕಕ್ಕೆ ಬಹುಮಾನ:–**

ಪುಸ್ತಕ ಬಹುಮಾನದ ಮೊತ್ತ ರೂ 25,000/–. ಪುಸ್ತಕ ಬಹುಮಾನಕ್ಕೆ ಕಳುಹಿಸುವ ಪುಸ್ತಕವು ಪುನರ್ ಮುದ್ರಣವಾಗಿರಬಾರದು. ಮೊದಲು ಆವೃತಿಯಲ್ಲಿ ಪ್ರಕಟಗೊಂಡಿರಬೇಕು. ಪುಸ್ತಕ ಬಹುಮಾನಕ್ಕೆ ಕಳುಹಿಸುವ ಪುಸ್ತಕಗಳು ಯಾವುದೇ ತರಗತಿಗಳಿಗೆ ಪಠ್ಯಪುಸ್ತಕವಾಗಿರಬಾರದು. ಪುಸ್ತಕವು ಲೇಖಕರ ಸ್ವಂತ ರಚನೆಯಾಗಿರಬೇಕು. ಸಂಪಾದಿತ ಕೃತಿಯಾಗಿರಬಾರದು. ಪುಸ್ತಕ ಬಹುಮಾನಕ್ಕೆ ಆಯ್ಕೆಯಾದ ಪುಸ್ತಕದ ಲೇಖಕರಿಗೆ ಈ ಬಹುಮಾನ ನೀಡತಕ್ಕದ್ದು. ಪುಸ್ತಕ ಬಹುಮಾನಕ್ಕೆ ಆಯ್ಕೆ ಮಾಡುವಾಗ ಸದರಿ ವರ್ಷದಲ್ಲಿ ಕನಿಷ್ಠ 3 ಪುಸ್ತಕಗಳು ಬಹುಮಾನಕ್ಕೆ ಸ್ವೀಕೃತವಾಗಿರಬೇಕು.

ಒಂದೇ ಪ್ರಕಾರದಲ್ಲಿ ಎರಡು ಬಾರಿ ಪುಸ್ತಕ ಬಹುಮಾನ ಪಡೆದವರ ಪುಸ್ತಕವನ್ನು ಅದೇ ಪ್ರಕಾರದಲ್ಲಿ ಮತ್ತೆ ಬಹುಮಾನಕ್ಕೆ ಪರಿಗಣಿಸಲಾಗುವುದಿಲ್ಲ. ವಿವಿಧ ಸರ್ಕಾರಿ ಸಂಸ್ಥೆಗಳು, ವಿಶ್ವವಿದ್ಯಾಲಯಗಳು, ಕನ್ನಡ ಸಾಹಿತ್ಯ ಪರಿಷತ್ತು, ಕನ್ನಡ ಪುಸ್ತಕ ಪ್ರಾಧಿಕಾರ, ಇತರೆ ಎಲ್ಲಾ ಅಕಾಡೆಮಿಗಳು, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಇನ್ನೂ ಮುಂತಾದ ಅನುದಾನ ಸಂಸ್ಥೆಗಳಿಂದ ಅನುದಾನ ಪಡೆದು ತಾವೇ ಪ್ರಕಟಿಸಿದ ಅಥವಾ ಅಂತಹ ಸಂಸ್ಥೆಗಳೆ ಬರೆಸಿ ಪ್ರಕಟಿಸಿದ ಕೃತಿಗಳನ್ನು ಪ್ರಶಸ್ತಿಗೆ ಪರಿಗಣಿಸುವುದಿಲ್ಲ.

ಲಲತಕಲೆಗೆ ಸಂಬಂಧಪಟ್ಟ ಸಾಂಪ್ರದಾಯಿಕ, ಸಮಕಾಲೀನ, ಇತ್ಯಾದಿ ಯಾವುದೇ ಪ್ರಕಾರದ (ಚಿತ್ರಕಲೆ) ಲಲಿತಕಲೆಗೆ ಸಂಬಂಧಪಟ್ಟದ್ದಾಗಿರಬೇಕು. ಪಿ.ಹೆಚ್.ಡಿ. ಡಿ.ಡಿ. ಲಿಟ್ ಅಥವಾ ಅಧ್ಯಯನಕ್ಕಾಗಿ ಮಾಡಿದಂತಹ ಪುಸ್ತಕಗಳನ್ನು ಪರಿಗಣಿಸಲಾಗುವುದಿಲ್ಲ. ಕೃತಿ: ಪುಸ್ತಕವು ಕನಿಷ್ಠ 100 ಪುಟಗಳಿಗೂ ಹೆಚ್ಚಿನ ಪುಟಗಳನ್ನು ಹೊಂದಿರತಕ್ಕದ್ದು.

ಒಬ್ಬ ಲೇಖಕರು ಪುಸ್ತಕ ಬಹುಮಾನಕ್ಕೆ ಆಯ್ಕೆಯಾಗಿ ಬಹುಮಾನ ಪಡೆದ ನಂತರ ಆ ಲೇಖಕರು ಮತ್ತೆ 3 ವರ್ಷಗಳವರೆಗೆ ಲಲಿತಕಲೆಗೆ ಅಕಾಡೆಮಿಯಿಂದ ಬಹುಮಾನ ಪಡೆಯಬಾರದು. ಪುಸ್ತಕ ಬಹುಮಾನಕ್ಕೆ ಅರ್ಜಿ ಸಲ್ಲಿಸುವ ಲೇಖಕರು ತಾವು ಕಳುಹಿಸುವ ಪುಸ್ತಕ 4 ಪ್ರತಿಗಳನ್ನು ಉಚಿತವಾಗಿ ಕರ್ನಾಟಕ ಲಲಿತಕಲಾ ಅಕಾಡೆಮಿಗೆ ಕಡ್ಡಾಯವಾಗಿ ನೀಡಬೇಕು. ಪುಸ್ತಕಗಳನ್ನು ಯಾವುದೇ ಕಾರಣಕ್ಕೂ ಹಿಂದಿರುಗಿಸಲಾಗುವುದಿಲ್ಲ.

ಪುಸ್ತಕ ಬಹುಮಾನಕ್ಕೆ ಕಳುಹಿಸುವ ಪುಸ್ತಕಗಳು ಪ್ರಕಟಿತ ವರ್ಷವನ್ನು ನಮೂದಿಸದ ಅಥವಾ ಪ್ರಕಟಿತ ವರ್ಷವನ್ನು ತಿದ್ದಿದ ಪುಸ್ತಕಗಳನ್ನು ಪ್ರಶಸ್ತಿಗೆ ಪರಿಗಣಿಸುವುದಿಲ್ಲ. ಅಕಾಡೆಮಿಯಲ್ಲಿ ಪ್ರಸಕ್ತ ಸಾಲಿನಲ್ಲಿ ಸ್ವೀಕೃತವಾದ ಪುಸ್ತಕಗಳನ್ನು 3 ಮಂದಿ ವಿಷಯ ತಜ್ಞರಿಗೆ ಕಳುಹಿಸಿ ಅವರಿಂದ ಬಂದಂತಹ ಶಿಫಾರಸ್ಸು ಅಕಾಡೆಮಿಯ ಸಭೆಯಲ್ಲಿ ಮಂಡಿಸಿ ಅಕಾಡೆಮಿಯ ತೀರ್ಮಾನವೇ ಅಂತಿಮ ತೀರ್ಮಾನವಾಗಿರುತ್ತದೆ.

ಪುಸ್ತಕ ಬಹುಮಾನಕ್ಕೆ ಕಳುಹಿಸುವ ಪುಸ್ತಕಗಳು ದಿನಾಮಕ: 30-06-2018 ರಿಂದ 28-08-2018 ರ ಒಳಗಾಗಿ (ಸರ್ಕಾರಿ ರಜಾ ದಿನಗಳನ್ನು ಹೊರತುಪಡಿಸಿ) ಖುದ್ದಾಗಿ ಅಥವಾ ಅಂಚೆ ಮೂಲಕ ಕರ್ನಾಟಕ ಲಲಿತಕಲಾ ಅಕಾಡೆಮಿಗೆ ಸಲ್ಲಿಸಬಹುದಾಗಿದೆ. ನಿಗದಿತ ಅವಧಿ ಮುಗಿದ ನಂತರ ಬಂದಂತಹ ಪುಸ್ತಕಗಳನ್ನು ಪರಿಗಣಿಸಲಾಗವುದಿಲ್ಲ.

ಈ ಅವಧಿಯಲ್ಲಿ ಪ್ರಕಟವಾದ ಪುಸ್ತಕಗಳ ತಲಾ 4 ಪ್ರತಿಗಳನ್ನು ರಿಜಿಸ್ಟ್ರಾರ್, ಕರ್ನಾಟಕ ಲಲಿತಕಲಾ ಅಕಾಡೆಮಿ, ಕನ್ನಡ ಭವನ, 2ನೇ ಮಹಡಿ, ಜೆ.ಸಿ. ರಸ್ತೆ, ಬೆಂಗಳೂರು – 560 002, ಇವರಿಗೆ ರಿಜಿಸ್ಟರ್ಡ್ ಅಂಚೆ/ಕೊರಿಯರ್ ಮೂಲಕ ಅಥವಾ ಖುದ್ದಾಗಿ ದಿನಾಂಕ: 30-06-2018 ರಿಂದ ದಿನಾಂಕ: 29-08-2018 ರೊಳಗೆ ತಲುಪಿಸಬೇಕಾಗಿ ಕೋರಿದೆ. ಕಳುಹಿಸಲ್ಪಡುವ ಪುಸ್ತಕದ ಮೇಲೆ ತಿಳಿಸಿದ ಪ್ರಕಾರಗಳಲ್ಲಿ ಯಾವ ಚಿತ್ರಕಲಾ ಪ್ರಕಾರಕ್ಕೆ ಸೇರುತ್ತದೆ ಎನ್ನುವುದನ್ನು ಸ್ಪಷ್ಟವಾಗಿ ಪುಸ್ತಕದ ಶೀರ್ಷಿಕೆ ಪುಟದಲ್ಲಿ ಬರೆದಿರಬೇಕು ಎಂದು ಕರ್ನಾಟಕ ಲಲತಕಲಾ ಅಕಾಡೆಮಿಯ ಪ್ರಕಟಣೆ ತಿಳಿಸಿದೆ.

ಡಿಪಿಎಂ:ಜೆಡಿ:ಜಿಪಿಆರ್.

ಸಂಖ್ಯೆ 595/695

## Celebrating Birth Anniversary of Hans Bethe

**Bengaluru, July 3 (Karnataka Information)**

**Jawaharlal Nehru Planetarium is celebrating Hans Bethe's birth anniversary on July 4th under the programme entitled "Celebration of the Month". The programme basically focuses**

**on discussing the contributions of Hans Bethe to the field of Science.**

**Eligibility: Science Teachers, Date: July 4th, 2018, Venue- Jawaharlal Nehru Planetarium Sri. T. Chowdaiah Road, High Grounds, Bengaluru-560 001. Time 10-30 a.m. to 12-30 pm.**

**Interested teachers must register over phone or by email-info@taralaya.org. A maximum of 40 teachers can be accommodated on a first-come-first-served basis says official press release.**

**Further details may be obtained from Jawaharlal Nehru Planetarium on 2237 9725 / 2220 3234 or visit our swebsite:http://www.taralaya.org/announcements.php.**